ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಸಬ್‌ಜಡ್ಜ್‌ರವರ ಕೋರ್ಟ್‌ನಲ್ಲಿ.

ಸ್ಯ 1884ನೇ ಇಸವಿ ಅರ್ಜೀ ನಂಬರ್ 193.

ಮೃತಪಟ್ಟ ದಳ್ಳಾಳಿ ಛಾಬೂಮಿಯ್ಯ ಸಾಹೇಬರವರ ಆಸ್ತಿ ವಿಷಯದಲ್ಲಿ—

ಅರ್ಜೀದಾರ್ರು ಬೆಂಗಳೂರು ರಾಜಾಶಿಂಗನಪೇಟೆ ಮಹಮ್ಮದ್ ಹುಶೇ್ಕ, ಮೃತಪಟ್ಟ ಸದರೀ ದಳ್ಳಾಳಿ ಛಾಬೂಮಿಯ್ಯ ಸಾಹೇಬರ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ಸ್ಥಳದ ಮಹಮ್ಮದ್ ಹುಶೇ್ಕ ಸಾಬರು ಬೆಂಗಳೂರು ವಾಸಸ್ಥರಾಗಿ ಮೃತಪಟ್ಟವ ಬೂಮಿಯ್ಯ ಸಾಹೇಬರ ಜಿಂದಗಿ ಬಗ್ಯಾಗಿ ಬರತಕ್ಕ ಸೂಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ಸು ಮೇರಿಗೆ ಸರ್ ಫಿಕೇಟ್ ಬ್ಯಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮಹಮ್ಮದ್ ಹುಶೇ್ಕ ಸಾಹೇಬರ ಅರ್ಜೀಯನ್ನು 1884ನೇ ಇಸವೀ ಅಕ್ಟೋಬರ್ ತಿಂಗಳು ತಾರೀಖು 16ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಛಾಬೂಮಿಯ್ಯ ಸಾಹೇಬರವರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ಯ 1884ನೇ ಇಸವಿ ಅರ್ಜೀ ನಂಬರ್ 194.

ಮೃತಪಟ್ಟ ಮಲ್ಲಪ್ಪನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರ್ರು ಮದ್ದಗಿರಿ ತಾಲ್ಲೂಕು ಮಣಿವಿನಕುರಿಕೆ ಪರಪ್ಪ, ಮೃತಪಟ್ಟ ಸದರೀ ಮಲ್ಲಪ್ಪನವರಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಮಣಿವಿನಕುರಿಕೆ ಸ್ಥಳದ ಪರಪ್ಪನವರು ಮಣಿವಿನಕುರಿಕೆ ವಾಸಸ್ಥರಾಗಿ ಮೃತಪಟ್ಟ ಮಲ್ಲಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ ಸೂಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ಸು ಮೇರಿಗೆ ಸರಟಿಫಿಕೇಟ್ ಬ್ಯಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಪರಪ್ಪನವರ ಅರ್ಜೀಯನ್ನು 1884ನೇ ಇಸವೀ ಅಕ್ಟೋಬರ್ ತಿಂಗಳು ತಾರೀಖು 16ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮಲ್ಲಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಸೆಪ್ಟಂಬರ್ ತಿಂಗಳು 22ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸಿ. ಕೈನ್ಸ್,
ಸಬ್ ಜಡ್ಜ್.

ಮೈಸೂರು ಡಿಸ್ಟ್ರಿಕ್ಟ್.

ತಾರೀಖು 23ನೇ ಸೆಪ್ಟಂಬರ್ 1884.

ಇದರಿಂದ ತಿಳಿಯಪಡಿಸುವದೇನಂದರೆ, ಈ ಕೆಳಗೆ ನಮೂದಾಗುವ ಸಬ್ ರಿಜಿಸ್ಟ್ರಿ ಆಫೀಸಿನಲ್ಲಿ ಜೇವ್ತಾಸೆಸಾಗಿ ಇರತಕ್ಕ ಈ ಮುಂದೆ ವಿವರಿಸುವ ದಸ್ತಾವೇಜುಗಳನ್ನ ಹಾಜರ್‌ಮಾಡಿದವರೇ ಆಗಲಿ ಅಥವಾ ವಾಪಸುಪಡಿಯಲಿಕ್ಕೆ ಅವರಿಂದ ಕ್ರಮವಾಗಿ ಅಧಿಕಾರ ಹೊಂದಿದ ಮುತ್ತಾಲೀಕ ಯಾ ಹಕ್ಕುದಾರರೇ ಆಗಲಿ ಈ ನೋಟೀಸು ತಾರೀಖು ಲಾಗಾಯತು ಒಂದು ತಿಂಗಳ ವಳಗಾಗಿ ವಾಪಸ್ ತೆಗದುಕ್ಕೊಳ್ಳದೆ ತಪ್ಪಿದಪಕ್ಷ ರಿಜಿಸ್ಟ್ರೇಷನ್ ಆಕ್ಟು 85ನೇ ಸೆಕ್ಷನ್ ಮೇರೆ ಅವುಗಳನ್ನ ನಾಶಪಡಿಸಲ್ಪಡುವವು.